## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ವೈ.ಡಿ. ಕುನ್ನಿಭಾವಿ, ಹಿಂದಿನ ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಗದಗ, ಇವರ ವಿರುದ್ಧ ಇಲಾಖಾ ವಿಚಾರಣೆ – ಮಂಡನಾಧಿಕಾಗಳ ಬದಲಾವಣೆ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 162 ಪಬವ 2010, ದಿನಾಂಕ:23.11.2011

2) ವಿಚಾರಣಾಧಿಕಾರಿಗಳ ಪತ್ರ ದಿನಾಂಕ:16.08.2012.

****

ಪ್ರಸ್ತಾವನೆ:

ಶ್ರೀ ವೈ.ಡಿ. ಕುನ್ನಿಭಾವಿ, ಹಿಂದಿನ ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಗದಗ, ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ: 23.11.2011ರ ಆದೇಶದಲ್ಲಿ ಶ್ರೀ ಎಸ್.ಜಿ ಪಲ್ಲೇದ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ ಮತ್ತು ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಗದಗ, ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ:16.08.2012ರ ಪತ್ರದಲ್ಲಿ ವಿಚಾರಣೆ ಎದುರಿಸುತ್ತಿರುವ ಅಧಿಕಾರಿ ಉಪ ಕಾರ್ಯದರ್ಶಿ, ವೃಂದದ ಅಧಿಕಾರಿಯಾಗಿದ್ದು, ವಿಚಾರಣೆಗೆ ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಗದಗ, ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸುವುದು ಸೂಕ್ತವಾಗಿರುವುದಿಲ್ಲವಾದ ಕಾರಣ, ಆಪಾದಿತ ಅಧಿಕಾರಿಯ ವೃಂದದ ತತ್ಸಮಾನ ಅಧಿಕಾರಿಯನ್ನು ಮಂಡನಾಧಿಕಾರಿಯಾಗಿ ನೇಮಿಸುವಂತೆ ಕೋರಿದ್ದಾರೆ. ಆದುದರಿಂದ ಯೋಜನಾ ನಿರ್ದೇಶಕರು, ಡಿ.ಆರ್.ಡಿ.ಎ ಕೋಶ, ಜಿಲ್ಲಾ ಪಂಚಾಯತ್, ಗದಗ, ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಲು ನಿರ್ಧರಿಸಿ, ಸರ್ಕಾರವು ಈ ಮುಂದಿನಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 162 ಪಬವ 2010, ಬೆಂಗಳೂರು, ದಿನಾಂಕ: 03-11-2012.

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳಿಂದ, ಶ್ರೀ ವೈ.ಡಿ. ಕುನ್ನಭಾವಿ, ಇವೆರ ವಿರುದ್ಧ ಆದೇಶಿಸಿರುವ ಇಲಾಖಾ ವಿಚಾರಣೆಯಲ್ಲಿ ವಿಚಾರಣಾಧಿಕಾರಿಗಳ ಮುಂದೆ ಪ್ರಕರಣವನ್ನು ಮಂಡಿಸಲು ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಗದಗ, ಇವರ ಬದಲು ಯೋಜನಾ ನಿರ್ದೇಶಕರು, ಡಿ.ಆರ್.ಡಿ.ಎ ಕೋಶ, ಜಿಲ್ಲಾ ಪಂಚಾಯತ್, ಗದಗ, ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ರಘುನಾಥ್

(ಹೆಚ್.ಬಿ. ರಘುನಾಥ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

D 3/11/12

ಗೆ:

1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಗದಗ
   ಶ್ರೀ ಎಸ್.ಜಿ. ಪಲ್ಲೇದ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಜಿಲ್ಲಾಧಿಕಾರಿಗಳ ಕಛೇರಿ, ಗದಗ ಜಿಲ್ಲೆ (ವಿಚಾರಣಾಧಿಕಾರಿ).
3. ಯೋಜನಾ ನಿರ್ದೇಶಕರು ಡಿ.ಆರ್.ಡಿ.ಎ ಕೋಶ, ಜಿಲ್ಲಾ ಪಂಚಾಯಿತಿ, ಗದಗ(ಮಂಡನಾಧಿಕಾರಿ).
4. ಶ್ರೀ ವೈ.ಡಿ. ಕುನ್ನಿಭಾವಿ, ಉಪ ಯೋಜನಾ ವ್ಯವಸ್ಥಾಪಕರು, ಜಲ ನಿರ್ಮಲ ಯೋಜನೆ, ಜಿಲ್ಲಾ ಪಂಚಾಯತ್, ರಾಯಚೂರು ಹಾಗೂ ಹಿಂದಿನ ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಗದಗ.
5. ಮಾನ್ಯ ಉಪ ಮುಖ್ಯಮಂತ್ರಿಯವರ ವಿಶೇಷ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್)/ಉಪ ಕಾರ್ಯದರ್ಶಿ(ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆ.
7. ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
8. ಮಾಹಿತಿ ಕೇಂದ್ರ/ಶಾಖಾ ರಕ್ಷಕ ಕಡತ/ಹೆಚ್ಚುವರಿ ಪ್ರತಿ.